151 ನಿ.೬ ನಿ=72 ={101 4RR 260525

# ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಕೋಟ ಶ್ರೀನಿವಾಸ ಪೂಜಾರಿ ಇವರು ನಿಯಮ-72 ರ ಮೇರೆಗೆ ಮಂಡಿಸಿರುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

***

**ವಿಷಯ:** ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವ್ಯಾಪ್ತಿಯಲ್ಲಿನ ಗ್ರಾಮ ಪಂಚಾಯತಿಗಳಿಗೆ ಜನನ-ಮರಣ ನೊಂದಣಿ, ವಾಸ್ತವ್ಯ ದೃಢೀಕರಣ, ವಿವಾಹ ನೊಂದಣಿ ಅಧಿಕಾರಗಳನ್ನು ನೀಡಿ ಅನುಷ್ಠಾನ ಮಾಡುವುದು ಸೇರಿದಂತೆ ಸ್ಥಳೀಯ ಸರ್ಕಾರದ ಸಮಸ್ಯೆಗಳು ಮತ್ತು ಬೇಡಿಕೆಗಳ ಕುರಿತು.

*****

**ಉತ್ತರ:** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 58(1-ಎ) (1) (vii) ರಲ್ಲಿ ಗ್ರಾಮ ಪಂಚಾಯತಿಗಳು ಜನನ ಮತ್ತು ಮರಣಗಳ ತ್ವರಿತ ನೋಂದಣಿ ಮತ್ತು ಅದನ್ನು ವರದಿ ಮಾಡುವುದನ್ನು ಖಚಿತಪಡಿಸಿಕೊಳ್ಳುವ ಕರ್ತವ್ಯವನ್ನು ಹೊಂದಿರುತ್ತವೆ.

ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯು ಗ್ರಾಮೀಣ ಪ್ರದೇಶದಲ್ಲಿ ನಾಗರೀಕ ನೋಂದಣಿ ಪದ್ಧತಿಯನ್ನು ಬಲಪಡಿಸಲು ಹಾಗೂ ಘಟಿಸುವ ಶೇ. 100 ರಷ್ಟು ಜನನ, ಮರಣ, ನೋಂದಣಿ ಘಟನೆಗಳನ್ನು ದಾಖಲಿಸಲು ಜನನ ಮರಣ ನೋಂದಣಿ ಅಧಿನಿಯಮ 1969ರ ಪ್ರಕರಣ 7(5) ರನ್ವಯ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಜನನ ಮರಣ ಉಪ ನೋಂದಣಾಧಿಕಾರಿಗಳನ್ನಾಗಿ ನೇಮಿಸಲಾಗಿದೆ.

ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಸರ್ಕಾರದ ಸುತ್ತೋಲೆ ಸಂಖ್ಯೆ:ಆಸಾನಿ 77 ಜಮನೋ 2021 ದಿನಾಂಕ:18-08-2023 ರಲ್ಲಿ ಜನನ, ಮರಣ ನೋಂದಣಾಧಿಕಾರಿಗಳು ಹಾಗೂ ಜನನ, ಮರಣಗಳ ಉಪ ನೋಂದಣಾಧಿಕಾರಿಗಳು ಕಾರ್ಯನಿರ್ವಹಿಸಲು ಅಗತ್ಯವಾದ ಪ್ರಮಾಣಿತ ಕಾರ್ಯಾಚರಣೆ ವಿಧಾನಗಳನ್ನು (S.O.P) ನೀಡಲಾಗಿದೆ.

ಇ-ಜನ್ಮ ತಂತ್ರಾಂಶದಲ್ಲಿ ನೋಂದಾಯಿಸಿದ ಜನನ ಮತ್ತು ಮರಣ ಪ್ರಮಾಣ ಪತ್ರಗಳ ಪ್ರತಿಗಳನ್ನು ಬಾಪೂಜಿ ಸೇವಾ ಕೇಂದ್ರಗಳ ಮೂಲಕ ವಿತರಿಸಲಾಗುತ್ತಿದೆ. ಇ-ಜನ್ಮ ತಂತ್ರಾಂಶದಲ್ಲಿ ಪ್ರತಿಗಳನ್ನು ವಿತರಿಸುವ ಬಗ್ಗೆ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಡಾಟಾ ಎಂಟ್ರಿ ಆಪರೇಟರ್‌ಗಳಿಗೆ ಆನ್‌ಲೈನ್ ಮೂಲಕ ತರಬೇತಿಯನ್ನು ನೀಡಲಾಗಿದೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಕರ್ನಾಟಕ ವಿವಾಹಗಳ (ನೋಂದಣಿ ಮತ್ತು ವಿವಿಧ ನಿಬಂಧನೆಗಳು) ಕಾಯಿದೆ, 1976 (ಕರ್ನಾಟಕ ಅಧಿನಿಯಮ 2, 1984) ರ ಕಲಂ 4(1) ರಡಿಯಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ ಹಾಗೂ ಅಧಿಸೂಚನೆ ಸಂಖ್ಯೆ, WCD 100 SWW 2006, ದಿನಾಂಕ:07-11-2007 ಅನ್ನು ಮುಂದುವರಿಸಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಯನ್ನು ಗ್ರಾಮ ಪಂಚಾಯತ್ ಹಂತದ ವಿವಾಹ ನೋಂದಣಾಧಿಕಾರಿಗಳನ್ನಾಗಿ ನೇಮಿಸಿದ ಅಧಿಸೂಚನೆಯನ್ನು ದಿನಾಂಕ: 16.04.2022 ರಂದು ಹೊರಡಿಸಲಾಗಿದೆ.

ಒಳಾಡಳಿತ ಇಲಾಖೆಯು ಈ ಹಿಂದೆ ದಿನಾಂಕ:04-07-1966 ರಂದು ಅಧಿಸೂಚನೆಯನ್ನು ಹೊರಡಿಸಿ ಎಲ್ಲಾ ಜಿಲ್ಲೆಯ ಸಬ್ ರಿಜಿಸ್ಟ್ರಾರ್‌ಗಳನ್ನು ವಿವಾಹ ನೋಂದಣಾಧಿಕಾರಿಗಳನ್ನಾಗಿ ನೇಮಿಸಿರುವ ಕಾರಣ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ Hindu Marriage (Karnataka) Rules 1966 & The Special Marriage Act 1954 ರ ಸೆಕ್ಷನ್ 3 ರ ಅಡಿಯಲ್ಲಿ ವಿವಾಹ ಕಾಯ್ದೆ ನೋಂದಾಣಾಧಿಕಾರಿಗಳ ಅಧಿಕಾರವನ್ನು ವಿಸ್ತರಿಸಿ ಅಧಿಸೂಚನೆ ಹೊರಡಿಸಲು ಒಳಾಡಳಿತ ಇಲಾಖೆಯ ಸಹಮತಿ ಪಡೆಯಲು ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಒಳಾಡಳಿತ ಇಲಾಖೆಯ ಸಹಮತಿ ಸ್ವೀಕೃತವಾದ ನಂತರ ಗ್ರಾಮ ಪಂಚಾಯತಿ ಹಂತದಲ್ಲಿ ವಿವಾಹ ನೋಂದಣಿ ಪ್ರಮಾಣ ಪತ್ರವನ್ನು ವಿತರಿಸಲು ಕ್ರಮ ವಹಿಸಲಾಗುವುದು.

ವಾಸ್ತವ್ಯ ದೃಢೀಕರಣ ಪ್ರಮಾಣ ಪತ್ರ ವಿತರಿಸುವ ವಿಷಯವು ಕಂದಾಯ ಇಲಾಖೆ ವ್ಯಾಪ್ತಿಗೆ ಒಳಪಟ್ಟಿರುತ್ತದೆ.

ಸಂಖ್ಯೆ:RDPR 660 GPA 2023

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.